**ವಿಧಾನಪರಿಷತ್ ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ಇವರು ಮಂಡಿಸಿರುವ ನಿಯಮ-330ಕ್ಕೆ ಉತ್ತರ**

**ವಿಷಯ:-**

**ರಾಜ್ಯದಲ್ಲಿ ಉತ್ತಮವಾಗಿ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ ಪ್ರಸ್ತುತ ಅವಧಿಯವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಇದ್ದು ಸದರಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡದೆ ಇರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ವಿಷಯ ಶಿಕ್ಷಕರುಗಳಿಲ್ಲದೆ ಪ್ರತಿವರ್ಷ ಹಲವಾರು ಅನುದಾನಿತ ಶಾಲೆಗಳು ಮುಚ್ಚುತ್ತಿವೆ. ಸದರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ಹಲವಾರು ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದು, ಕೆಲವರು ವಯೋಮಿತಿ ಮೀರುತ್ತಿದ್ದು, ಹಲವಾರು ಶಿಕ್ಷಕರು ಅನುದಾನಕ್ಕೊಳಪಡಿಸಬಹುದೆಂಬ ಭರವಸೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ದಿ:01.01.2016 ರಿಂದ ಪ್ರಸ್ತುತ ಸಾಲಿನವರೆಗೆ ನಿವೃತ್ತಿ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಬೇಕೆಂಬ ವಿಷಯವನ್ನು ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಖಾಸಗಿ ಅನುದಾನಿತ ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

ಖಾಸಗಿ ಅನುದಾನಿತ ಪ್ರೌಢಶಾಲೆಯಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ದಿನಾಂಕ:28.11.2022ರಂದು ನೀಡಿರುವ ಅಭಿಪ್ರಾಯದಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆದ್ಯತೆ ನೀಡುವಂತೆ ತಿಳಿಸಿರುತ್ತದೆ. ಆದ್ದರಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುವುದು.

**ಸಂಖ್ಯೆ: ಇಪಿ 100 ಎಸ್‌ಇಎಸ್ 2023**

**(ಬಿ.ಸಿ.ನಾಗೇಶ್)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಹಾಗೂ ಸಕಾಲ ಸಚಿವರು**